# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 812 |
| ಸದಸ್ಯರ ಹೆಸರು | : | ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | : | 20.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಸಿಟಿ ಮುನಿಸಿಪಲ್ ಕಾರ್ಪೊರೇಷನ್‌ಗೆ ಯಾವ ದಿನಾಂಕದಂದು ಚುನಾವಣೆ ನಡೆದಿದೆ: | ಬೀದರ್ ನಗರಸಭೆಗೆ ದಿನಾಂಕ:27.04.2021ರಂದು ಚುನಾವಣೆ ನಡೆದಿರುತ್ತದೆ. |
| (ಆ) | ಸಿಟಿ ಮುನಿಸಿಪಲ್ ಕಾರ್ಪೊರೇಷನ್‌ಗೆ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಚುನಾವಣೆಗೆ ಮೀಸಲಾತಿಯನ್ನು ನಿಗದಿಪಡಿಸಲಾಗಿದೆಯೇ: ಇಲ್ಲದಿದ್ದಲ್ಲಿ ಯಾವ ನಿರ್ದಿಷ್ಟ ದಿನಾಂಕದಂದು ಮೀಸಲಾತಿಯನ್ನು ನಿಗದಿಪಡಿಸಲಾಗುವುದು: | ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಚುನಾವಣೆಗೆ ಮೀಸಲಾತಿಯನ್ನು ಅಧಿಸೂಚನೆ ಸಂಖ್ಯೆ: ನಅಇ 107 ಎಂಎಲ್ಆರ್ 2020(1), ದಿನಾಂಕ08.10.2020 ರಂದು ನಿಗದಿಪಡಿಸಲಾಗಿರುತ್ತದೆ. |
| (ಇ) | ಚುನಾವಣೆ ನಂತರ ಫಲಿತಾಂಶ ಘೋಷಣೆಯಾಗಿ ಸಾಕಷ್ಟು ದಿವಸಗಳಾದರೂ ಕಾರ್ಪೊರೇಷನ್‌ಗೆ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಚುನಾವಣೆ ನಡೆಸದಿರಲು ಕಾರಣಗಳೇನು: | ಸರ್ಕಾರದ ಪತ್ರ ಸಂಖ್ಯೆ: ನಅಇ 229 ಎಂಎಲ್ಆರ್ 2022, ದಿನಾಂಕ:17.09.2022ರಂದು ಬೀದರ್ ನಗರಸಭೆಯ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಸ್ಥಾನಗಳಿಗೆ ದಿನಾಂಕ08.10.2020ರ ಅಧಿಸೂಚನೆಯನ್ವಯ ನಿಯಮಾನುಸಾರ ಚುನಾವಣೆ ನಡೆಸುವಂತೆ ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| (ಈ) | ಸರ್ಕಾರವು ಇನ್ನಾದರೂ ಪ್ರಜಾಪ್ರಭುತ್ವವನ್ನು ಉಳಿಸುವ ದಿಶೆಯಲ್ಲಿ ಕಾರ್ಪೊರೇಷನ್‌ಗೆ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಚುನಾವಣೆಯನ್ನು ಯಾವಾಗ ನಡೆಸಲಿದೆ: ಮತ್ತು ಬೀದರ್ ಜನತೆಯ ಕುಂದು-ಕೊರತೆಗಳನ್ನು ನೀಗಿಸುವ ಅವಕಾಶವನ್ನು ಕಲ್ಪಿಸಲಾಗುವುದೇ ಹಾಗೂ ಚುನಾವಣೆ ನಡೆಸುವ ಬಗ್ಗೆ ದಿನಾಂಕವನ್ನು ತಿಳಿಸಲಾಗುವುದೇ? | ಅಧಿಸೂಚನೆ ಸಂಖ್ಯೆ: ನಇ 92 ಎಂಎಲ್ಆರ್ 2018, ದಿನಾಂಕ:12.03.2019ರಲ್ಲಿ ಕರ್ನಾಟಕ ಪೌರಸಭೆಗಳ ಕಾಯ್ದೆ-1964ರ ಸೆಕ್ಷನ್-315ರನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಹೊಸ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ನಗರ ಸ್ಥಳೀಯ ಸಂಸ್ಥೆಗಳ ದೈನಂದಿನ ಕಾರ್ಯನಿರ್ವಹಣೆಗಾಗಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಲಾಗಿರುತ್ತದೆ. |

ಸಂಖ್ಯೆ: ನಅಇ 50 ಎಲ್‌ಸಿಕ್ಯೂ 2022

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು